सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಸಂಖ್ಯೆ:ರಾಚುಆ: 07 :ಟಿಜೆಡ್‌ಪಿ:2016

ನಂ.8, 1ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ
ಮಾರಾಟ ಮಂಡಳಿ ಕಟ್ಟಡ (ಹಿಂಭಾಗ)
ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು,
ದಿನಾಂಕ: 30-01-2016

-: ಸಾರ್ವಜನಿಕರ ತಿಳುವಳಿಕೆಗಾಗಿ :-

ರಾಜ್ಯ ಚುನಾವಣಾ ಆಯೋಗವು ರಾಜ್ಯದಲ್ಲಿ ಅವಧಿ ಮುಗಿಯುವ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳಿಗೆ ಎರಡು ಹಂತಗಳಲ್ಲಿ ಚುನಾವಣೆ ನಡೆಸಲು ದಿನಾಂಕ: 18-01-2016 ರಂದು ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಅದರಂತೆ ಚುನಾವಣಾ ಮಾದರಿ ನೀತಿ ಸಂಹಿತೆಯು ಗ್ರಾಮೀಣ ಪ್ರದೇಶಗಳಲ್ಲಿ ಜಾರಿಯಲ್ಲಿರುತ್ತದೆ.

ಇತ್ತೀಚಿನ ದಿನಗಳಲ್ಲಿ ಚುನಾವಣಾ ಸಮಯದಲ್ಲಿ ಚುನಾವಣೆಗೆ ಸ್ಪರ್ಧಿಸಿದ ಅಭ್ಯರ್ಥಿಗಳು ಚುನಾವಣೆಯಲ್ಲಿ ಹಣ, ಮದ್ಯ, ಇತ್ಯಾದಿ ವಸ್ತುಗಳ ಹಂಚಿಕೆ ಮಾಡುತ್ತಿರುವ ಕುರಿತು ವ್ಯಾಪಕವಾಗಿ ಸಾರ್ವಜನಿಕವಾಗಿ ಚರ್ಚಿತವಾಗುತ್ತಿರುವುದು ಸರಿಯಷ್ಟೆ.

ಮಾದರಿ ನೀತಿ ಸಂಹಿತೆಯು ನಗರ/ಪಟ್ಟಣ ಪ್ರದೇಶಗಳಿಗೆ ಅನ್ವಯಿಸುವುದಿಲ್ಲವಾದರೂ, ನಗರ/ಪಟ್ಟಣ ವಾಸಿಗಳಿಗೆ ಹಣ, ಮದ್ಯ ಇತ್ಯಾದಿ ವಸ್ತುಗಳ ಆಮಿಶಗಳನ್ನು ನೀಡಿ ಅಕ್ರಮ ಮತದಾನಕ್ಕೆ ಓಲೈಸುವುದು, ಗ್ರಾಮಾಂತರ ಪ್ರದೇಶದ ವಾಸಿಗಳನ್ನು/ಮತದಾರರನ್ನು ನಗರ/ಪಟ್ಟಣ ಪ್ರದೇಶಕ್ಕೆ ಕರೆತಂದು ಅವರಿಗೂ ಸಹ ಹಣ, ಮದ್ಯ ಮತ್ತು ಇತರೆ ವಸ್ತುಗಳನ್ನು ಹಂಚಿಕೆ ಮಾಡುವುದು ಕಂಡುಬಂದಲ್ಲಿ **ಭಾರತೀಯ ದಂಡ ಸಂಹಿತೆ ಹಾಗೂ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದನ್ವಯ ಭ್ರಷ್ಟಾಚಾರವೆಂದು (Corrupt Practice)** ಪರಿಗಣಿಸಿ ಅಂತಹವರ ವಿರುದ್ಧ ದೂರು ದಾಖಲಿಸಲಾಗುತ್ತದೆ. ಚುನಾವಣಾ ನೀತಿ ಸಂಹಿತೆಯ ಉಲ್ಲಂಘನೆ ಪ್ರಕರಣಗಳಿಗೆ ಜಿಲ್ಲಾಡಳಿತವು ಮತ್ತು ಮಾದರಿ ನೀತಿ ಸಂಹಿತೆಯ ತಂಡಗಳು ಕಡ್ಡಾಯವಾಗಿ ಕ್ರಮ ತೆಗೆದುಕೊಳ್ಳಲು ಸೂಚಿಸಲಾಗಿದೆ.

**ನೀತಿ ಸಂಹಿತೆ ಉಲ್ಲಂಘಿಸಿದವರು ಭಾರತೀಯ ದಂಡ ಸಂಹಿತೆ ಪ್ರಕರಣ 171 ರಡಿಯಲ್ಲಿ ಶಿಕ್ಷಾರ್ಹ ಅಪರಾಧಕ್ಕೆ ಗುರಿಯಾಗುತ್ತಾರೆ. ಅಲ್ಲದೆ, ಕರ್ನಾಟಕ ಪಂಚಾಯತ್ ಅಧಿನಿಯಮ, 1993 ರ ಪ್ರಕರಣ 23 ರನ್ವಯ ಐದು ವರ್ಷಗಳ ಅವಧಿಯವರೆಗೆ ಯಾವುದೇ ಸ್ಥಳೀಯ ಪ್ರಾಧಿಕಾರದ ಸದಸ್ಯತ್ವಕ್ಕೆ ಅನರ್ಹಗೊಳ್ಳುತ್ತಾರೆ.**

ಇಂತಹ ಪ್ರಕರಣಗಳು ಸಾರ್ವಜನಿಕರ ಗಮನಕ್ಕೆ ಬಂದಲ್ಲಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ತೆರೆಯಲಾಗಿರುವ ನಿಯಂತ್ರಣಾ ಕೊಠಡಿಯಲ್ಲಿ ದೂರು ದಾಖಲಿಸಬಹುದಾಗಿರುತ್ತದೆ.

(ಆರ್.ಚಂದ್ರಶೇಖರ್)
ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ

D:\MJ\Press Note.docx